ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ಕೊಳವೆಬಾವಿಗೆ ನಿಗಧಿಪಡಿಸಿದ ಘಟಕವೆಚ್ಚವನ್ನು ಹೆಚ್ಚಿಸುವ ಬಗ್ಗೆ.

ಉಲ್ಲೇಖ- (1)ಸರ್ಕಾರದ ಅದೇಶ ಸಂಖ್ಯೆ ಸಕಇ 152 ಎಸ್‌ಡಿಸಿ 2002, ದಿನಾಂಕ:06-06-2002.
(2)ಸರ್ಕಾರದ ಆದೇಶ ಸಂಖ್ಯೆ:ಸಕಇ 48 ಎಸ್‌ಡಿಸಿ 2008, ದಿನಾಂಕ:12-11-2010.
(3) ಏಕಕಡತದ ಸಂಖ್ಯೆ:ಡಾ:ಬಿಆರ್‌ಅಂನಿ/ಗಂಕಯೋ/34/2012-13, ದಿನಾಂಕ: 17-11-2012.

*****

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಆದೇಶದಲ್ಲಿ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿಗಳ ಘಟಕವೆಚ್ಚವನ್ನು ರೂ. 75,000/-ದಿಂದ ರೂ.1.00 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಇದರಲ್ಲಿ ಸಹಾಯಧನ ರೂ. 86,000/- ಮತ್ತು ಉಳಿದ ರೂ. 14,000/- ಸಾಲದ ರೂಪದಲ್ಲಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಆದೇಶದಲ್ಲಿ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ನೀರಾವರಿ ಕೊಳವೆಬಾವಿ/ತೆರೆದ ಬಾವಿಗಳ ಘಟಕವೆಚ್ಚವನ್ನು ರೂ. 86,000/-ದಿಂದ ರೂ. 1.00 ಲಕ್ಷಕ್ಕೆ ಹೆಚ್ಚಿಸಲು ಮತ್ತು ಸಾಲವನ್ನು ರೂ. 50,000/- ವರೆಗೆ ಅಥವಾ ಸಹಾಯಧನಕ್ಕಿಂತ ಹೆಚ್ಚಿಗೆ ತಗಲುವ ವೆಚ್ಚ ಎರಡರಲ್ಲಿ ಯಾವುದು ಕಡಿಮೆಯೋ ಅದನ್ನು ಸಂಬಂಧಪಟ್ಟ ನಿಗಮಗಳಿಂದ ನೀಡಲು ಆದೇಶಿಸಿದೆ.

ಮೇಲೆ ಓದಲಾದ ಕ್ರಮಸಂಖ್ಯೆ(3)ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು, ಡಾ:ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಂದ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಸಣ್ಣ ಮತ್ತು ಅತಿ ಸಣ್ಣ ರೈತರ ಖುಷ್ಕಿ ಜಮೀನುಗಳಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲು ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದ್ದು, ಈಗಿರುವ ಘಟಕ ವೆಚ್ಚದಲ್ಲಿ ರೂ. 1.00 ಲಕ್ಷಗಳ ಸಹಾಯಧನವಿದ್ದು ರೂ. 50,000/- ಅವಧಿಸಾಲವಿರುತ್ತದೆ. ಕೊಳವೆ ಬಾವಿ ನಿರ್ಮಾಣದ ವೆಚ್ಚವು ಡೀಸೆಲ್, ಉಕ್ಕು ಮತ್ತು ತಾಮ್ರದ ಬೆಲೆಗಳ ಮೇಲೆ ನೇರ ಸಂಬಂಧ ಹೊಂದಿರುತ್ತದೆ. ಇತ್ತೀಚಿನ ದಿನಗಳಲ್ಲಿ ಕಚ್ಚಾ ಸಾಮಗ್ರಿಗಳ ಬೆಲೆಗಳು ಒಂದೇ ಸಮನೆ ಏರಿಕೆಯಾಗುತ್ತಿರುವುದರಿಂದ ವೈಯಕ್ತಿಕ ನೀರಾವರಿ ಕೊಳವೆಬಾವಿಗಳಿಗೆ ಸರ್ಕಾರ ನಿಗಧಿಪಡಿಸಿರುವ ಘಟಕ ವೆಚ್ಚ ರೂ. 1.50 ಲಕ್ಷದಲ್ಲಿ ಘಟಕ ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ. ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾಗುವ ಕೊಳವೆಬಾವಿಗಳ ಆಳ ಸಾಮಾನ್ಯವಾಗಿ 120 ಮೀಟರ್‌ನಿಂದ 250 ಮೀಟರ್ ವರೆಗೆ ಇರುತ್ತದೆ. ಇತರೆ ಇಲಾಖೆಗಳಾದ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಮತ್ತು ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ (RDPR &BWSSB)ಗಳು ಅಳವಡಿಸಿಕೊಂಡಿರುವ ಎಸ್.ಆರ್.ದರಗಳಂತೆ ಲೆಕ್ಕಾಚಾರ ಮಾಡಲಾಗಿದ್ದು, ಒಂದು ಕೊಳವೆಬಾವಿ ಘಟಕ್ಕಕೆ ಸರಾಸರಿ ರೂ.2.28 ಲಕ್ಷ ತಗಲುತ್ತದೆ. ಆದುದರಿಂದ ಪ್ರಸ್ತುತ ಇರುವ ಘಟಕ ವೆಚ್ಚದ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗಧಿಪಡಿಸಿದಲ್ಲಿ ಫಲಾನುಭವಿಗೆ ಹೆಚ್ಚಿನ ಹೊರೆಯಿಲ್ಲದೇ

ಘಟಕವನ್ನು ಸೃಜಿಸಿ ಪೂರ್ಣಗೊಳಿಸಲು ಅನುಕೂಲವಾಗುತ್ತದೆ. ಈ ರೀತಿಯ ಹೆಚ್ಚಳದಿಂದ ಬೇಕಾಗುವ ಮೊತ್ತವನ್ನು ಗಂಗಾ ಕಲ್ಯಾಣ ಯೋಜನೆಗೆ ರಾಜ್ಯ ಅಯವ್ಯಯದಲ್ಲಿ ನಿಗಮಗಳಿಗೆ ಒದಗಿಸುವ ಹಣದಿಂದ ಭರಿಸಲಾಗುವುದು. ಪ್ರಯುಕ್ತ ಪ್ರಸ್ತುತ ಇರುವ ಘಟಕ ವೆಚ್ಚವನ್ನು ರೂ.1.50 ಲಕ್ಷಗಳಿಂದ ರೂ. 2.00 ಲಕ್ಷಕ್ಕೆ ಹೆಚ್ಚಿಸುವಂತೆ ಕೋರಿರುತ್ತಾರೆ.

2013-14 ನೇ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯ ಅಡಿಯಲ್ಲಿ ಘಟಕ ವೆಚ್ಚವನ್ನು ರೂ. 2.00 ಲಕ್ಷ ಗಳಿಗೆ ಹೆಚ್ಚಳ ಮಾಡಲು ಪ್ರಸ್ತಾಪಿಸಲಾಗಿದೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ:ಸಕಇ 243 ಎಸ್‌ಡಿಸಿ 2012,</u>
<u>ಬೆಂಗಳೂರು, ದಿನಾಂಕ:23/05/2013.</u>

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದಾಗಿ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿಗಳ ಘಟಕವೆಚ್ಚವನ್ನು ರೂ. 1.50 ಲಕ್ಷದಿಂದ ರೂ.2.00 ಲಕ್ಷಕ್ಕೆ ಹೆಚ್ಚಿಸಿ, ಸರ್ಕಾರ ಮಂಜೂರಾತಿ ನೀಡಿದೆ. ಇದರಲ್ಲಿ ಸಹಾಯಧನ ರೂ. 1,50 ಲಕ್ಷ (ರೂಪಾಯಿ ಒಂದು ಲಕ್ಷ ಐವತ್ತು ಸಾವಿರಗಳು ಮಾತ್ರ) ಮತ್ತು ಉಳಿದ ರೂ. 50,000/-(ರೂಪಾಯಿ ಐವತ್ತು ಸಾವಿರಗಳು ಮಾತ್ರ) ಗಳನ್ನು ಸಾಲದ ರೂಪದಲ್ಲಿ ನೀಡಲಾಗಿದೆ.

ಪರಿಷ್ಕೃತ ದರಗಳು 2013-14ನೇ ಸಾಲಿನಿಂದ ಅನ್ವಯವಾಗುತ್ತದೆ. ಈ ಯೋಜನೆಗೆ ಬೇಕಾಗುವ ವೆಚ್ಚವನ್ನು 2013-14 ನೇ ಸಾಲಿನ ಅಯವ್ಯದಲ್ಲಿ ಒದಗಿಸಿದ ಅನುದಾನದಿಂದ ಭರಿಸತಕ್ಕದ್ದು.

ಮೇಲೆ ಆದೇಶಿಸಿದ ಅಂಶಗಳನ್ನು ಹೊರತು ಪಡಿಸಿ ಗಂಗಾ ಕಲ್ಯಾಣ ಯೋಜನೆಯ ಇತರ ಷರತ್ತುಗಳು ಈ ಮೊದಲಿನಂತೆಯೇ ಅನ್ವಯಿಸುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 886 ವೆಚ್ಚ-3/12, ದಿನಾಂಕ 01-03-2013 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

ವಿ. ರತ್ನಮ್ಮ
(ವಿ. ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ,ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದಶಿ-3, ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:-

(1) ಮಹಾಲೇಖಪಾಲಕರು, (ಅ&ಇ) ಕರ್ನಾಟಕ ಸರ್ಕಾರ, ಬೆಂಗಳೂರು.
(2) ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
(3) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ,ಬೆಂಗಳೂರು.

(4) ನಿರ್ದೇಶಕರು,ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ,ಬಹುಮಹಡಿ ಕಟ್ಟಡ,ಬೆಂಗಳೂರು.
(5) ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ,ಬೆಂಗಳೂರು.
(6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
(7) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು
(8) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
(9) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
(10)ಮಾನ್ಯ ಮುಖ್ಯಮಂತ್ರಿಗಳ ಆಪ್ತಕಾರ್ಯದರ್ಶಿಗಳು.
(11)ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
(12)ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳವರ ಆಪ್ತ ಕಾರ್ಯದರ್ಶಿಗಳು.
(13)ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿಗಳು ,ಸ.ಕ.ಇ.ವಿಕಾಸಸೌಧ. ಬೆಂಗಳೂರು.
(14)ಆರ್ಥಿಕ ಇಲಾಖೆ ವೆಚ್ಚ -3/ಯೋಜನಾ ಇಲಾಖೆ (ಟಿಪಿ2)
(15)ಸರ್ಕಾರದ ಉಪ ಕಾರ್ಯದರ್ಶಿಗಳು- 1 & 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.
(16)ಸರ್ಕಾರದ ಅಧೀನ ಕಾರ್ಯದರ್ಶಿ-1& 2 ರವರ ಆಪ್ತ ಸಹಾಯಕರು,ಸ.ಕ.ಇ.ಬೆಂಗಳೂರು
(17)ಶಾಖಾ ರಕ್ಷಾ ಕಡತ: ಬಿಡಿ ಪ್ರತಿಗಳು.